ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರಿ ಕಾಲೇಜುಗಳಲ್ಲಿ ನಡೆಸುವ ಸ್ನಾತಕೋತ್ತರ ಕೋರ್ಸುಗಳಿಗೆ ಶುಲ್ಕವನ್ನು ನಿಗಧಿಪಡಿಸುವ ಬಗ್ಗೆ.

ಓದಲಾಗಿದೆ: 1. ಕಾಲೇಜು ಶಿಕ್ಷಣ ಇಲಾಖೆಯ ಪತ್ರ ಸಂ. ಕಾಶಿಇ/ಶೈವಿ/ಸ್ನಾಕೋಶುಲ್ಕ-84/2005-06, ದಿನಾಂಕ:29-06-2006.

2. ಸರ್ಕಾರಿ ಪತ್ರ ಸಂ. ಇಡಿ 283 ಯುಬಿವಿ 2003, ದಿನಾಂಕ:10-10-2003.

*****

ಪ್ರಸ್ತಾವನೆ:

1) ಓದಲಾದ(1)ರ ಪತ್ರದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರು ಸರ್ಕಾರಿ ಪದವಿ ಕಾಲೇಜುಗಳಲ್ಲಿ ನಡೆಸುವ ಸ್ನಾತಕೋತ್ತರ ಪದವಿ ಕೋರ್ಸುಗಳಾದ ಎಂ.ಎಸ್ಸಿ-ಸೂಕ್ಷ್ಮಜೀವಶಾಸ್ತ್ರ ಮತ್ತು ಎಂ.ಎಸ್ಸಿ-ಜೈವಿಕ ತಂತ್ರಜ್ಞಾನ ಕೋರ್ಸುಗಳ ಪ್ರಯೋಗಾಲಯಕ್ಕೆ ಬೇಕಾಗುವ ಉಪಕರಣಗಳು ಮತ್ತು ರಾಸಾಯನಿಕಗಳನ್ನು ಒದಗಿಸಿಕೊಳ್ಳಲು ಸಾಧ್ಯವಾಗದೆ ಈ ಕೋರ್ಸುಗಳನ್ನು ನಡೆಸಲು ತುಂಬಾ ಕಷ್ಟವಾಗುತ್ತಿದೆ ಎಂದು ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ವಿಷಯ ತಜ್ಞರಿಂದ ತರಬೇತಿ ಮತ್ತು ವಿಶೇಷ ಉಪನ್ಯಾಸ ಕಾರ್ಯಕ್ರಮಗಳನ್ನು ಏರ್ಪಡಿಸಲು ಸಾಧ್ಯವಿಲ್ಲವೆಂದು ತಿಳಿಸಿರುತ್ತಾರೆ ಹಾಗೂ ಈ ಹಿನ್ನೆಲೆಯಲ್ಲಿ, ಸ್ನಾತಕೋತ್ತರ ಪದವಿ ಕೋರ್ಸುಗಳನ್ನು ಸರ್ಕಾರಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಂದ ಸ್ವಲ್ಪ ಪ್ರಮಾಣದಲ್ಲಿ ಶುಲ್ಕವನ್ನು ಸಂಗ್ರಹಿಸಲು ಮತ್ತು ಈ ಶುಲ್ಕವನ್ನು ಪ್ರತಿ ವರ್ಷ ಶೇಕಡಾ 10ರಷ್ಟು ಹೆಚ್ಚಿಸಿಕೊಳ್ಳಲು ಸಹ ಕೋರಿರುತ್ತಾರೆ.

2) ಓದಲಾದ(2)ರ ಪತ್ರದಲ್ಲಿ ಬೆಂಗಳೂರಿನ ಆರ್.ಸಿ. ಕಾಲೇಜಿನಲ್ಲಿ ನಡೆಸುತ್ತಿರುವ ಎಂಬಿಎ ಕೋರ್ಸುಗಳಿಗೆ ಶುಲ್ಕವನ್ನು ನಿಗಧಿಪಡಿಸಿರುವುದನ್ನು ಉಲ್ಲೇಖಿಸಿರುತ್ತಾರೆ.

3) ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರಿ ಆದೇಶ ಸಂ. ಇಡಿ 264 ಯುಬಿವಿ 2006, ಬೆಂಗಳೂರು, ದಿನಾಂಕ: 14-08-2007.

2007-08ನೇ ಶೈಕ್ಷಣಿಕ ಸಾಲಿನಿಂದ ಸರ್ಕಾರಿ ಕಾಲೇಜುಗಳಲ್ಲಿ ನಡೆಸುವ ಸ್ನಾತಕೋತ್ತರ ಕೋರ್ಸುಗಳನ್ನು (ಎಂ.ಬಿ.ಎ., ಕೋರ್ಸನ್ನು ಹೊರತುಪಡಿಸಿ) ಪ್ರಾರಂಭಿಸಿ, ಅವುಗಳನ್ನು ಪರಿಣಾಮಕಾರಿಯಾಗಿ ನಡೆಸಲು ಪ್ರವೇಶ ಪಡೆದ ವಿದ್ಯಾರ್ಥಿಗಳಿಂದ ಈ ಕೆಳಗಿನಂತೆ ಏಕರೂಪವಾದ ಶುಲ್ಕವನ್ನು ವಸೂಲಿ ಮಾಡಲು ಅನುಮತಿ ನೀಡಲಾಗಿದೆ ಮತ್ತು ಈ ಶುಲ್ಕವನ್ನು ಪ್ರತಿ ವರ್ಷ ಶೇಕಡ 10ರಷ್ಟನ್ನು ಎಲ್ಲಾ ವಿಧವಾದ ಶುಲ್ಕಗಳನ್ನು ಹೆಚ್ಚಿಸಲು ಅನುಮತಿ ನೀಡಲಾಗಿದೆ.

| ಕ್ರ.ಸಂ. | ವಿವರ | ಶುಲ್ಕ (ರೂ). |
|---|---|---|
| 1 | ಅರ್ಜಿ ಶುಲ್ಕ | 20.00 |
| 2 | ಪ್ರವೇಶ ಶುಲ್ಕ | 45.00 |
| 3 | ಪಾಠ ಶುಲ್ಕ | 710.00 |
| 4 | ಪ್ರಯೋಗಾಲಯ ಶುಲ್ಕ | 200.00 |
| 5 | ವೈದ್ಯಕೀಯ ತಪಾಸಣಾ ಶುಲ್ಕ | 20.00 |
| 6 | ವರ್ಗಾವಣೆ ಪತ್ರ ಶುಲ್ಕ | 30.00 |
| 7 | ವಿದ್ಯಾಭ್ಯಾಸ ಪ್ರಮಾಣ ಪತ್ರ ಶುಲ್ಕ | 10.00 |
| 8 | ವಾಚನಾಲಯ ಶುಲ್ಕ | 55.00 |
| 9 | ಕ್ರೀಡಾ ಶುಲ್ಕ | 55.00 |
| 10 | ಗ್ರಂಥಾಲಯ ಶುಲ್ಕ (ಬೈಂಡಿಂಗ್ ಸೇರಿ) | 55.00 |

SO_UNI1

| | | |
|---|---|---|
| 11 | ಸ್ನಾತಕೋತ್ತರ ವಿಭಾಗ ಅಭಿವೃದ್ಧಿ ಶುಲ್ಕ | 500.00 |
| 12 | ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿ | 10.00 |
| 13 | ಅಧ್ಯಾಪಕರ ಕ್ಷೇಮಾಭಿವೃದ್ಧಿ ನಿಧಿ | 15.00 |
| 14 | ನೋಂದಣಿ ಶುಲ್ಕ } | - |
| 15 | ವಿಶ್ವವಿದ್ಯಾನಿಲಯ ಪರೀಕ್ಷಾ ಶುಲ್ಕ } | - |
| 16 | ಕ್ರೀಡಾ ಅಬಿವೃದ್ಧಿ ಶುಲ್ಕ } | - |

ಅಲ್ಲದೆ, ಈ ಸ್ನಾತಕೋತ್ತರ ಕೋರ್ಸುಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಳ್ಳಲು ಸ್ನಾತಕೋತ್ತರ ವಿದ್ಯಾರ್ಥಿಗಳಿಂದ ರೂ. 500(ಐದು ನೂರು ರೂ.ಗಳು ಮಾತ್ರ) ಸ್ನಾತಕೋತ್ತರ ವಿಭಾಗದ ಅಭಿವೃದ್ಧಿ ಶುಲ್ಕವನ್ನಾಗಿ ವಸೂಲು ಮಾಡಿ, ಈ ಕಾಲೇಜುಗಳ ಸ್ನಾತಕೋತ್ತರ ವಿಭಾಗ ಅಭಿವೃದ್ಧಿಗಾಗಿ ಪ್ರಾಂಶುಪಾಲರ ಹಂತದಲ್ಲಿ ಬಳಸಿಕೊಳ್ಳಲೂ ಸಹ ಅನುಮತಿ ನೀಡಲಾಗಿದೆ.

ಎಲ್ಲಾ ವಿಧದ ಖರೀದಿಗಳಿಗೆ ಸಂಬಂಧಿಸಿದಂತೆ, ಪ್ರಚಲಿತದಲ್ಲಿರುವ ಖರೀದಿ ನಿಯಮಗಳನ್ನು ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ 2000ನ್ನು ಕಡ್ಡಾಯವಾಗಿ ಮತ್ತು ಕಟ್ಟು-ನಿಟ್ಟಾಗಿ ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ. ಆಇ 223 ವೆಚ್ಚ-8/07, ದಿನಾಂಕ:23-07-2007ರಲ್ಲಿ ನೀಡಿರುವ ಸಹಮತಿಯೊಡನೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಎಸ್. ಜಾಪಾಲಿ)
ಸರ್ಕಾರದ ಉಪ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
4. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಯವರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-8, ವಿಧಾನ ಸೌಧ, ಬೆಂಗಳೂರು
6. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಶಿಕ್ಷಣ ಇಲಾಖೆ, ಬೆಂಗಳೂರು
7. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಶಿಕ್ಷಣ ಇಲಾಖೆ, ಬೆಂಗಳೂರು
8. ಉನ್ನತ ಶಿಕ್ಷಣ ಇಲಾಖೆಯ ಎಲ್ಲಾ ಅಧೀನ ಕಾರ್ಯದರ್ಶಿ ಹಾಗೂ ಶಾಖಾಧಿಕಾರಿಗಳಿಗೆ.
9. ಸಂಯೋಜಕರು, ಇ-ಆಡಳಿತ ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.

SO_UNI1